# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಟಿ.ದಾಸರಹಳ್ಳಿ ಉಪ ವಿಭಾಗ, ದಾಸರಹಳ್ಳಿ ವಲಯ
ಮಾರಮ್ಮ ದೇವಸ್ಥಾನದ ಹತ್ತಿರ, ಬಾಗಲಗುಂಟೆ

ಸಂಖ್ಯೆ:ಬೃ.ಬೆಂ.ಮ.ಪಾ/ದಾ.ವ/ಸ.ಅ/ವಾ.14/ಪಿಆರ್: **07** :2020–21

ದಿನಾಂಕ: 16.01.2021

## ಬಾಗಲಗುಂಟೆ ವಾರ್ಡ್–14ರ ವಾರ್ಡ್ ಸಭೆಯ ನಡವಳಿ

ದಿ.16.01.2021 ರಂದು ಬೆಳಗ್ಗೆ 11.30 ಗಂಟೆಗೆ ಶ್ರೀ.ಕೆ.ಮರುಳಸಿದ್ದಪ್ಪ, ವಾರ್ಡ್ ಕಮಿಟಿ ನೋಡೆಲ್ ಆಫೀಸರ್ ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

**ಹಾಜರಿದ್ದವರು:**

1. ಶ್ರೀ.ವೆಂಕಟೇಶಪ್ಪ, ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು, ಬಾಗಲಗುಂಟೆ ವಾರ್ಡ್ ನಂ.14
2. ಶ್ರೀ.ಕಮಲ್ ಗದ್ದಿಮನಿ, ಕಿರಿಯ ಆರೋಗ್ಯ ಪರಿವೀಕ್ಷಕರು, ಬಾಗಲಗುಂಟೆ ಹಾಗೂ ವಾರ್ಡ್ ಸಮಿತಿ ಸದಸ್ಯರು
3. ಶ್ರೀ.ಲೋಕೇಶ್ ಎಂ.ಎನ್, ಬಿ.ಡಬ್ಲ್ಯೂ.ಎಸ್.ಎಸ್.ಬಿ, ಬಾಗಲಗುಂಟೆ
4. ಶ್ರೀ.ಮೂಡಲಗಿರಿಯಪ್ಪ, ಅಧ್ಯಕ್ಷರು, ಸೌಂದರ್ಯ ನಗರ ಕ್ಷೇಮಾಭಿವೃದ್ಧಿ ಸಂಘ
5. ಶ್ರೀ.ಲಕ್ಷ್ಮಿ ವೆಂಕಟೇಶ್, ನಾಗರೀಕ ಹಿತ ರಕ್ಷಣಾ ಸಮಿತಿ, ಮುನಿಕೊಂಡಪ್ಪ ಬಡಾವಣೆ
6. ಶ್ರೀ.ಪಾಪಣ್ಣ, ನಾಗರೀಕ ಹಿತ ರಕ್ಷಣಾ ಸಮಿತಿ ಸದಸ್ಯರು
7. ಶ್ರೀ.ಗುರುಪ್ರಸಾದ್, ವಲಯಾಧ್ಯಕ್ಷರು, ಲಯನ್ ಸಂಸ್ಥೆ
8. ಶ್ರೀ.ರಾಮೇಗೌಡರು, ನಾಗರೀಕ ಹಿತ ರಕ್ಷಣಾ ಸಮಿತಿ, ಭುವನೇಶ್ವರಿನಗರ
9. ಶ್ರೀ.ಕೃಷ್ಣಮೂರ್ತಿ, ಡಿಫೆನ್ಸ್ ಕಾಲೋನಿ, ನಾಗರೀಕ ಕ್ಷೇಮಾಭಿವೃದ್ಧಿ ಸಂಘ
10. ಶ್ರೀ.ಸದಾಶಿವಯ್ಯ, ಎಂ.ಇ.ಐ ಬಡಾವಣೆ ನಾಗರೀಕ ಹಿತರಕ್ಷಣಾ ಸಮಿತಿ

ಶ್ರೀ.ಕೆ.ಮರುಳಸಿದ್ದಪ್ಪ, ನೋಡೆಲ್ ಅಧಿಕಾರಿ, ವಾರ್ಡ್ ನಂ.14, ಬಾಗಲಗುಂಟೆ ರವರು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಭೆಯ ಸದಸ್ಯರು ಹಾಜರಿದ್ದ ಅಧಿಕಾರಿಗಳನ್ನು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳನ್ನು ಸ್ವಾಗತಿಸಿ ಜನವರಿ ತಿಂಗಳ ಮೂರನೇ ಶನಿವಾರದ ಸಭೆಯನ್ನು ಪ್ರಾರಂಭಿಸಿದರು.

### 1. ಹಿಂದಿನ ಸಭೆಯಲ್ಲಿ ಚರ್ಚಿಸಲಾದ ವಿಷಯಗಳು ಹಾಗೂ ದೂರುಗಳಿಗೆ ಸಂಬಂಧಪಟ್ಟಂತೆ ತೆಗೆದುಕೊಂಡ ಕ್ರಮಗಳ ಬಗ್ಗೆ.

ಶ್ರೀ.ಮೂಡಲಗಿರಿಯಪ್ಪ, ಸೌಂದರ್ಯನಗರ ಕ್ಷೇಮಾಭಿವೃದ್ಧಿ ಸಂಘ ಸದಸ್ಯರು, 110 ಹಳ್ಳಿ ವ್ಯಾಪ್ತಿಯಲ್ಲಿ ಬರುವ ಸಿಡೇದಹಳ್ಳಿ ಗ್ರಾಮ ಪರಿಮಿತಿಯಲ್ಲಿ ಹಲವಾರು ಕೊಳವೆ ಬಾವಿಗಳನ್ನು ದುರಸ್ಥಿಮಾಡಬೇಕಾಗಿರುವುದರಿಂದ ಸಾರ್ವಜನಿಕರಿಗೆ ಕುಡಿಯುವ ನೀರು ಸರಬರಾಜು ಮಾಡಲು ತೊಂದರೆಯಾಗಿರುವುದಾಗಿ ಸಭೆಯಲ್ಲಿ ತಿಳಿಸಿದರು. ಸದರಿ ವಿಷಯದ ಬಗ್ಗೆ ಸಹಾಯಕ ಅಭಿಯಂತರರು ಪ್ರತಿಕ್ರಿಯಿಸಿ ಕೊಳವೆ ಬಾವಿ ದುರಸ್ಥಿಗೊಳಿಸುವ ಕಾಮಗಾರಿಗೆ ಟೆಂಡರ್ ಕರೆಯಲಾಗಿದೆ ಹಾಗೂ ಟೆಂಡರ್ ಪ್ರಕ್ರಿಯೆ ಮುಗಿದ ನಂತರ ಕ್ರಮ ಕೈಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು ಹಾಗೂ ಸೌಂದರ್ಯ ಬಡಾವಣೆಯಲ್ಲಿ ಬೀದಿ ದೀಪಗಳನ್ನು ಸ್ಥಳ ಬದಲಾವಣೆ ಮಾಡಲು ಕೋರಿದ್ದು, ಅದರಂತೆ ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಇಲಾಖೆ ಅಧಿಕಾರಿಗಳಿಗೆ ಸದರಿ ವಿಷಯದ ಬಗ್ಗೆ ಕ್ರಮಕೈಗೊಳ್ಳಲು ಸೂಚಿಸಲಾಯಿತು.

ಶ್ರೀ.ಮುದ್ದಹನುಮೇಗೌಡರು ಸಿದ್ದೇಶ್ವರ ಬಡಾವಣೆಯಲ್ಲಿ ಕುಡಿಯುವ ನೀರು ಸಮರ್ಪಕವಾಗಿ ಸರಬರಾಜು ಮಾಡುತ್ತಿರುವುದಿಲ್ಲವೆಂದು ಹಾಗೂ ಸದರಿ ಬಡಾವಣೆಯಲ್ಲಿ ಹೊಸದಾಗಿ ಕೊಳವೆ ಬಾವಿ ಕೊರೆಸಿ, ನೀರು ಸರಬರಾಜು ಮಾಡಬೇಕೆಂದು ಸಭೆಯಲ್ಲಿ ಪ್ರಸ್ಥಾಪಿಸಿದರು. ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಸಿದ್ದೇಶ್ವರ ಬಡಾವಣೆಯಲ್ಲಿರುವ ಕೊಳವೆ ಬಾವಿಯ ಪಂಪು ಮೋಟಾರನ್ನು ದುರಸ್ಥಿಪಡಿಸಿ ಕುಡಿಯುವ ನೀರನ್ನು ಸಮರ್ಪಕವಾಗಿ ಸರಬರಾಜು ಮಾಡಲಾಗಿದೆ ಎಂದು ವಾರ್ಡ್ ಅಭಿಯಂತರರು ಸಭೆಯಲ್ಲಿ ತಿಳಿಸಿದರು.



Scanned by CamScanner

## 2. ಕೋವಿಡ್-19 ಸೋಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಬಗ್ಗೆ.

ವಾರ್ಡ್‌ನ ಆರೋಗ್ಯ ಪರಿವೀಕ್ಷಕರು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ ಚರ್ಚಿಸಿ ಪ್ರತೀ ದಿನ 02 ಮೊಬೈಲ್ ಟೀಂ ನ ಮೂಲಕ ರೋಗ ಪತ್ತೆ ಕಾರ್ಯವನ್ನು ನಡೆಸಲಾಗುತ್ತಿರುತ್ತದೆ. ಬಾಗಲಗುಂಟೆ ವಾರ್ಡ್ ನಂ.14ರ ವ್ಯಾಪ್ತಿಯಲ್ಲಿ ಒಟ್ಟು ಪಾಸಿಟಿವ್ ಕೇಸ್ 2396, ಬಿಡುಗಡೆ 2050 ಹಾಗೂ ಒಟ್ಟು Active case ಪ್ರಕರಣಗಳು 210 ಇರುತ್ತದೆಂದು ಸಭೆಯಲ್ಲಿ ತಿಳಿಸಿದರು. ಸಾರ್ವಜನಿಕರು ಹೆಚ್ಚಾಗಿ ಆಗಮಿಸುವ ಪ್ರದೇಶಗಳಲ್ಲಿ ತಾತ್ಕಾಲಿಕ ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಕ್ರಮವಹಿಸಿರುವ ಬಗ್ಗೆ ಸಭೆಯಲ್ಲಿ ತಿಳಿಸಲಾಯಿತು. ಹಾಗೂ ಕಡ್ಡಾಯವಾಗಿ ಮಾಸ್ಕ್ ಧರಿಸುವ ಸಂಬಂಧ ಫೀಲ್ಡ್ ಮಾರ್ಷಲ್‌ಗಳ ಸಮನ್ವಯದೊಂದಿಗೆ ಜನಜಾಗೃತಿ ಮೂಡಿಸಲಾಗುತ್ತಿದೆ ಹಾಗೂ ಮಾಸ್ಕ್ ಧರಿಸದೇ ಸಾರ್ವಜನಿಕವಾಗಿ ಓಡಾಡುವವರಿಗೆ ರೂ.250.00 ಗಳನ್ನು ದಂಢ ವಿಧಿಸಿ ಕ್ರಮ ಜರುಗಿಸಲಾಗುತ್ತಿರುತ್ತದೆ ಎಂದು ಸಭೆಯಲ್ಲಿ ವಿವರಿಸಿದರು.

## 3. ವಾರ್ಡ್‌ನಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಬಗ್ಗೆ.

ಶ್ರೀ.ಗುರುಪ್ರಸಾದ್, ವಲಯಾಧ್ಯಕ್ಷರು, ಲಯನ್ ಸಂಸ್ಥೆ ರವರು ವಾರ್ಡ್ ವ್ಯಾಪ್ತಿಯ ಖಾಲಿ ನಿವೇಶನಗಳಲ್ಲಿ ಗಿಡ ಗೆಂಟೆಗಳು ಬೆಳೆದಿದ್ದು, ನಿವೇಶನದ ಅಕ್ಕಪಕ್ಕದ ಮನೆಗಳಲ್ಲಿ ವಾಸಿಸುವ ಜನರಿಗೆ ತುಂಬಾ ತೊಂದರೆಯಾಗುತ್ತಿದ್ದು, ಕೆ.ಎಂ.ಸಿ ನಿಯಮಾಳಿಗಳ ಪ್ರಕಾರ ಸದರಿ ನಿವೇಶನಗಳ ಮಾಲೀಕರುಗಳಿಗೆ ನೋಟೀಸ್ ನೀಡಿ ನಿವೇಶನಗಳಲ್ಲಿ ಬೆಳೆದಿರುವ ಗಿಡಗೆಂಟೆಗಳನ್ನು ತೆರವುಗೊಳಿಸಿ, ಸ್ವಚ್ಛತೆ ಕಾಪಾಡಲು ಸೂಚಿಸಲು ತಿಳಿಸಿದರು. ಅದರಂತೆ ನೋಡೆಲ್ ಅಧಿಕಾರಿರವರು ವಾರ್ಡ್ ಅಭಿಯಂತರರಿಗೆ ಕ್ರಮಕೈಗೊಳ್ಳಲು ಸಭೆಯಲ್ಲಿ ಸೂಚಿಸಲಾಯಿತು.

## 4.ವಾರ್ಡ್ ವ್ಯಾಪ್ತಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳ ಹಾಗೂ ರಸ್ತೆಗುಂಡಿ ಮುಚ್ಚುವ ಬಗ್ಗೆ.

ಬಾಗಲಗುಂಟೆ ವಾರ್ಡ್ ನಂ.14ರ ಮುನಿಕೊಂಡಪ್ಪ ಬಡಾವಣೆ ಮುಖ್ಯರಸ್ತೆ, ಮುನೇಶ್ವರನಗರ, ರಾಮಯ್ಯ ಬಡಾವಣೆ 1ನೇ ಮುಖ್ಯರಸ್ತೆ, ಅಮ್ಮಾಜಿ ಕಲ್ಯಾಣ ಮಂಟಪದ ಎದುರು ರಸ್ತೆ, ರಾಮಯ್ಯ ಬಡಾವಣೆ 2ನೇ ಅಡ್ಡರಸ್ತೆಗಳಲ್ಲಿ ಉಂಟಾಗಿದ್ದ ರಸ್ತೆಗುಂಡಿಗಳನ್ನು ಮುಚ್ಚಿರುವುದಾಗಿ ವಾರ್ಡ್ ಅಭಿಯಂತರರರು ಸಭೆಯಲ್ಲಿ ತಿಳಿಸಿದರು.

## 5.ವಾರ್ಡ್ ವ್ಯಾಪ್ತಿಯಲ್ಲಿ ವಾಹನಗಳ ಸುಗಮ ಸಂಚಾರ ಮತ್ತು ವಾಹನ ನಿಲುಗಡೆಯ ಬಗ್ಗೆ.

ಶ್ರೀ.ವಿ.ರಾಮೇಗೌಡ, ಭುವನೇಶ್ವರಿನಗರದ ಹಿತರಕ್ಷಣಾ ಸಮಿರಿ ರವರು ಸಭೆಯಲ್ಲಿ ಮಾತನಾಡಿ ಭುವನೇಶ್ವರಿನಗರದ ಎಸ್.ಬಿ.ಐ ಬ್ಯಾಂಕ್ ಶಾಖೆಯ ಹತ್ತಿರ ವಾಹನ ನಿಲುಗಡೆಯಿಂದಾಗಿ ತೊಂದರೆಯಾಗುತ್ತಿರುವುದಾಗಿ ಮತ್ತು ಪೈಪ್‌ಲೈನ್ ರಸ್ತೆಯ ಉದ್ಯಾನವನದ ಇಕ್ಕೆಲಗಳಲ್ಲಿ ದ್ವಿಮುಖ ವಾಹನ ಸಂಚಾರವಿದ್ದು, ಇದರಿಂದಾಗಿ ಸಂಚಾರ ದಟ್ಟಣೆ ಉಂಟಾಗುತ್ತಿರುವುದಾಗಿ ತಿಳಿಸಿದರು. ಈ ಬಗ್ಗೆ ಪರಿಶೀಲಿಸಲು ಮತ್ತು ಸಂಬಂಧಪಟ್ಟ ಸಂಚಾರಠಾಣೆಯ ಆರಕ್ಷಕರಿಗೆ ಈ ಕುರಿತು ಮಾಹಿತಿ ನೀಡಲು ಸಹಾಯಕ ಅಭಿಯಂತರರಿಗೆ ನೋಡೆಲ್ ಅಧಿಕಾರಿಗಳು ತಿಳಿಸಿದರು.

## 6. ಇತರೆ ವಿಷಯುಗಳ ಬಗ್ಗೆ.

1. ಸೌಂದರ್ಯ ಬಡಾವಣೆಯಲ್ಲಿ ಕುಡಿಯುವ ನೀರಿಗಾಗಿ 50ಮೀ. ಪೈಪ್‌ಲೈನ್ ಮಾಡಿಕೊಡಲು ಸಂಬಂಧಪಟ್ಟ ನೀರು ಸರಬರಾಜುದಾರರು ಕೋರಿದ್ದು, ಅದರಂತೆ ವಾರ್ಡ್ ಅಭಿಯಂತರರಿಗೆ ಕ್ರಮವಹಿಸಲು ಸೂಚಿಸಲಾಯಿತು.

2. ಹಾಲಿ ವಾರ್ಡ್ ವ್ಯಾಪ್ತಿಯಲ್ಲಿ ಬೆಸ್ಕಾಂ ಇಲಾಖಾ ವತಿಯಿಂದ ಕೇಬಲ್ ಅಳವಡಿಸುತ್ತಿದ್ದು, ಸಂಬಂಧಪಟ್ಟ ಗುತ್ತಿಗೆದಾರರು ಮನಸ್ಸಿಗೆ ಬಂದಂತೆ ಕಾಮಗಾರಿ ನಿರ್ವಹಿಸುತ್ತಿದ್ದು, ಮನಸೋ ಇಚ್ಛೆ ಎಲ್ಲಿಬೇಕೆಂದರಲ್ಲಿ ಗುಂಡಿಗಳನ್ನು ತೆಗೆದು ರಸ್ತೆಯ ಮೇಲ್ಭಾಗದಲ್ಲಿ ಮಣ್ಣಿನ ರಾಶಿ ಹಾಕಿರುವುದು ಕಂಡುಬಂದಿದ್ದು ಇದರಿಂದ ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತುಂಬಾ ತೊಂದರೆ ಉಂಟಾಗುತ್ತಿರುವುದು ಕಂಡುಬಂದಿರುತ್ತದೆ. ಈ ವಿಷಯದ ಬಗ್ಗೆ ಸಂಬಂಧಪಟ್ಟ ಬೆಸ್ಕಾಂ ಅಧಿಕಾರಿಗಳಿಗೆ ಮುಂದಿನ ಸಭೆಯಲ್ಲಿ ತಪ್ಪದೇ ಹಾಜರಾಗಲು ಸೂಚಿಸಿ ಮೇಲಿನ ಸಮಸ್ಯೆಯನ್ನು ತುರ್ತಾಗಿ ಪರಿಹರಿಸಲು ಸಭೆಯಲ್ಲಿ ಚರ್ಚಿಸಲಾಯಿತು.

3. ಶ್ರೀ.ಸದಾಶಿವಯ್ಯ ವಾರ್ಡ್ ಸಮಿತಿ ಸದಸ್ಯರು ರವರು ವಾರ್ಡ್ ವ್ಯಾಪ್ತಿಯ ಬಾಗಲಗುಂಟೆಯಲ್ಲಿ ಸುಮಾರು ಎರಡು ಎಕರೆ ವಿಸ್ತೀರ್ಣದ ಸ್ಮಶಾನವಿದ್ದು, ಸದರಿ ಸ್ಮಶಾನದಲ್ಲಿ ಗಿಡಮರಗಳು ಯಥೇಚ್ಛವಾಗಿ ಬೆಳೆದಿದ್ದು, ಇದರಿಂದ ಸ್ಮಶಾನದ ಒಳಗಡೆ ಪ್ರವೇಶ ಮಾಡಲು ಕೂಡ ಸಾಧ್ಯವಾಗದ ಪರಿಸ್ಥಿತಿಯಲ್ಲಿರುವುದು ಕಂಡುಬಂದಿರುವುದಾಗಿ ತಿಳಿಸಿದರು. ಸದರಿ ಜಾಗವನ್ನು ಪರಿಶೀಲಿಸಿ, ತುರ್ತಾಗಿ ಸ್ವಚ್ಛಗೊಳಿಸಲು ವಾರ್ಡ್ ಅಭಿಯಂತರರಿಗೆ ನೋಡೆಲ್ ಅಧಿಕಾರಿ ರವರು ಸೂಚಿಸಲಾಯಿತು.



Scanned by CamScanner

ಅಂತಿಮವಾಗಿ ನೋಡೆಲ್ ಅಧಿಕಾರಿ ಮಾತನಾಡಿ, ಸಕಾಲದಲ್ಲಿ ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ಸ್ಪಂದಿಸಿ ಬಗೆಹರಿಸಲು ಎಲ್ಲಾ ಇಲಾಖೆಗಳ ಸಮನ್ವಯತೆ ಇಂದ ಕೆಲಸ ನಿರ್ವಹಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ನೋಡೆಲ್ ಅಧಿಕಾರಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ. 14, ಬಾಗಲಗುಂಟೆ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

16/01/2021
ನೋಡಲ್ ಅಧಿಕಾರಿ ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು, ವಾ.ನಂ.14
ಮತ್ತು ಕಾರ್ಯಪಾಲಕ ಅಭಿಯಂತರರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

<u>ಅಧಿಕಾರಿಗಳ ಮಾಹಿತಿಗಾಗಿ</u>

1) ಮಾನ್ಯ ವಿಶೇಷ ಆಯುಕ್ತರು, ಬಿಬಿಎಂಪಿ, ಬೆಂಗಳೂರು ರವರ ಅವಗಾಹನೆಗಾಗಿ ಮಂಡಿಸಿದೆ.
2) ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
3) ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯರವರ ಅವಗಾಹನೆಗಾಗಿ ಮಂಡಿಸಿದೆ.
4) ಉಪ ನಿಯಂತ್ರಕರು (ಹಣಕಾಸು) ದಾ.ವ ರವರ ಮಾಹಿತಿಗಾಗಿ ಕಳುಹಿಸಿದೆ.
5) ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಾರ್ಯಪಾಲಕ ಅಭಿಯಂತರರು (ಟಿ.ದಾ.ಉ.ವಿ) ರವರ ಮಾಹಿತಿಗಾಗಿ ಕಳುಹಿಸಿದೆ
7) ಸಹಾಯಕ ಕಂದಾಯ ಅಧಿಕಾರಿ (ದಾ.ಉ.ವಿ) ಬಿಬಿಎಂಪಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ.
8) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸಲ್ಲಿಸಿದೆ
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಸಲ್ಲಿಸಿದೆ.
10) ಕಛೇರಿ ಪ್ರತಿ.

Scanned by CamScanner